**All India Radio: Bangalore**
**National Bulletin In Kannada**
**07.09.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ನೂತನ ಚೈತನ್ಯದೊಂದಿಗೆ ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆಯತ್ತ ಭಾರತ-ಫ್ರಾನ್ಸ್ ಮುನ್ನಡೆ - ಪ್ರಧಾನಿ ನರೇಂದ್ರ ಮೋದಿ
2. ದೆಹಲಿ ಕಟ್ಟಡ ದುರಂತ: ಮ್ಯಾಜಿಸ್ಟ್ರೇಟ್ ತನಿಖೆಗೆ ಮುಖ್ಯಮಂತ್ರಿ ರೇಖಾ ಗುಪ್ತಾ ಆದೇಶ, ಮೃತರ ಸಂಖ್ಯೆ ೬ಕ್ಕೆ ಏರಿಕೆ
3. ಖಾಸಗೀಕರಣ ವರದಿಗಳನ್ನು ತಳ್ಳಿ ಹಾಕಿದ ಇಸ್ರೋ ; ಖಾಸಗಿ ವಲಯದ ಭಾಗವಹಿಸುವಿಕೆಯಿಂದ ಸಾಮರ್ಥ್ಯ ವೃದ್ಧಿಯೆಂದು ಬಣ್ಣನೆ
4. ಹೊರ್ಮುಜ್ ಜಲಸಂಧಿ ಬಳಿ ಹೊಸ ನಿರ್ಬಂಧಿತ ವಲಯ ಘೋಷಣೆಗೆ ಇರಾನ್ ತೀರ್ಮಾನ
5. ಐಎಫ್‌ಸಿ ೧೦ ವರ್ಷದೊಳಗಿನವರ ಏಷ್ಯನ್‌ಕಪ್ ಫುಟ್ಬಾಲ್ ; ೧೦ ವರ್ಷಗಳ ಬಳಿಕ ಅರ್ಹತೆ ಗಿಟ್ಟಿಸಿಕೊಂಡ ಭಾರತ

<><><><>

ಭಾರತ ಮತ್ತು ಫ್ರಾನ್ಸ್ ನಡುವಿನ ಬಾಂಧವ್ಯವು ಹೊಸ ಎತ್ತರಕ್ಕೆ ತಲುಪಿದ್ದು, ಉಭಯ ದೇಶಗಳು 'ವಿಶೇಷ ಜಾಗತಿಕ ಕಾರ್ಯತಂತ್ರದ ಸಹಭಾಗಿತ್ವ'ವನ್ನು ಬಲಪಡಿಸುತ್ತಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ. ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ನೂತನವಾಗಿ ನಿರ್ಮಿಸಲಾದ ಬಿಎಪಿಎಸ್ ಸ್ವಾಮಿನಾರಾಯಣ್ ಹಿಂದೂ ಮಂದಿರದ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಮಾತನಾಡಿದ ಅವರು, ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ರಕ್ಷಣೆ, ಬಾಹ್ಯಾಕಾಶ ಹಾಗೂ ಹವಾಮಾನ ವೈಪರೀತ್ಯ ನಿಯಂತ್ರಣ ಕ್ಷೇತ್ರಗಳಲ್ಲಿ ಎರಡೂ ದೇಶಗಳು ನೂತನ ಶಕ್ತಿಯೊಂದಿಗೆ ಮುನ್ನಡೆಯುತ್ತಿವೆ ಎಂದು ಹೇಳಿದರು. ೨೦೨೬ ರ ವರ್ಷವನ್ನು 'ಭಾರತ-ಫ್ರಾನ್ಸ್ ನಾವೀನ್ಯತಾ ವರ್ಷ'ವಾಗಿ ಆಚರಿಸಲಾಗುತ್ತಿದ್ದು, ಉಭಯ ದೇಶಗಳ ಈ ಐತಿಹಾಸಿಕ ನಂಟು ಸುದೀರ್ಘ ಸಾಂಸ್ಕೃತಿಕ ಹಾಗೂ ರಾಜಕೀಯ ಅಡಿಪಾಯದ ಮೇಲೆ ನಿಂತಿದೆ ಎಂದರು. ಫ್ರೆಂಚ್ ವಿದ್ವಾಂಸರಿಂದ ಸಂಸ್ಕೃತ ಪ್ರಸಾರ, ರೊಮ್ಯಾನ್ ರೊಲ್ಯಾಂಡ್ ಅವರ ಸಾಹಿತ್ಯ

ಹಾಗೂ ಐಫೆಲ್ ಟವರ್ ಎದುರು ನಡೆಯುವ ಯೋಗ ದಿನಾಚರಣೆಗಳು ಭಾರತ-ಫ್ರಾನ್ಸ್ ನಡುವಿನ ನಿಕಟ ಸಾಂಸ್ಕೃತಿಕ ಬೆಸುಗೆಗೆ ಸಾಕ್ಷಿಯಾಗಿವೆ ಎಂದು ಪ್ರಧಾನಿ ಸ್ಮರಿಸಿದರು. 'ಮೇಡ್ ಇನ್ ಇಂಡಿಯಾ' ಹಾಗೂ 'ಬಿಲ್ಟ್ ಇನ್ ಫ್ರಾನ್ಸ್' ಮಾದರಿಯಲ್ಲಿ, ಭಾರತದ ಸಾಂಪ್ರದಾಯಿಕ ಶಿಲ್ಪಕಲೆ ಮತ್ತು ಫ್ರಾನ್ಸ್‌ನ ಆಧುನಿಕ ಎಂಜಿನಿಯರಿಂಗ್ ತಂತ್ರಜ್ಞಾನದ ಸಮ್ಮಿಲನವಾಗಿ ಈ ಮಂದಿರ ನಿರ್ಮಾಣಗೊಂಡಿದೆ.

<><><><>

ದೆಹಲಿಯ ಸತ್ಯನಿಕೇತನ ಪ್ರದೇಶದಲ್ಲಿ ಸಂಭವಿಸಿದ ಬಹುಮಹಡಿ ಕಟ್ಟಡ ಕುಸಿತ ದುರಂತಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿದ್ದು, ಕಟ್ಟಡದ ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಲು ನಿರ್ದೇಶಿಸಿದ್ದಾರೆ. ಸ್ಥಳ ಪರಿಶೀಲನೆ ಹಾಗೂ ಪ್ರಾಥಮಿಕ ವರದಿ ಪಡೆದ ನಂತರ ಮುಖ್ಯಮಂತ್ರಿಗಳ ಕಾರ್ಯಾಲಯ ಈ ನಿರ್ಧಾರ ಪ್ರಕಟಿಸಿದ್ದು, ಈ ಗಂಭೀರ ದುರಂತಕ್ಕೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ. ನಿನ್ನೆ ತಡರಾತ್ರಿ ಮತ್ತೊಂದು ಮೃತದೇಹ ಪತ್ತೆಯಾಗುವುದರೊಂದಿಗೆ ಈ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ ೬ಕ್ಕೆ ಏರಿಕೆಯಾಗಿದೆ. ಎನ್‌ಡಿಆರ್‌ಎಫ್, ಅಗ್ನಿಶಾಮಕ ದಳ ಹಾಗೂ ದೆಹಲಿ ಪೊಲೀಸರು ಸ್ಥಳದಲ್ಲಿ ಬಿದ್ದಿರುವ ಅವಶೇಷಗಳನ್ನು ತೆರವುಗೊಳಿಸಿ ರಕ್ಷಣಾ ಕಾರ್ಯಾಚರಣೆಯನ್ನು ಮುಂದುವರಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ದೆಹಲಿ ಮುಖ್ಯಮಂತ್ರಿ, ಪೊಲೀಸ್ ಆಯುಕ್ತರು ಹಾಗೂ ಎನ್‌ಡಿಆರ್‌ಎಫ್ ಮಹಾನಿರ್ದೇಶಕರೊಂದಿಗೆ ಮಾತನಾಡಿ ಪರಿಸ್ಥಿತಿಯ ಪರಾಮರ್ಶೆ ನಡೆಸಿದ್ದು, ಗಾಯಾಳುಗಳಿಗೆ ಸೂಕ್ತ ವೈದ್ಯಕೀಯ ನೆರವು ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪೇಯಿಂಗ್ ಗೆಸ್ಟ್ ನಿಲಯವಾಗಿ ಬಳಕೆಯಾಗುತ್ತಿದ್ದ ಈ ಕಟ್ಟಡದ ತಳಮಹಡಿಯಲ್ಲಿ ನಿನ್ನೆ ಮಧ್ಯಾಹ್ನ ದುರಸ್ತಿ ಕಾಮಗಾರಿ ನಡೆಯುತ್ತಿದ್ದಾಗ ಕಟ್ಟಡ ಕುಸಿದುಬಿದ್ದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಘಟನೆಯ ಬೆನ್ನಲ್ಲೇ ನಾಲ್ಕಕ್ಕಿಂತ ಹೆಚ್ಚು ಮಹಡಿಗಳನ್ನು ಹೊಂದಿರುವ ಎಲ್ಲಾ ಅಕ್ರಮವಾಗಿ ನಿರ್ಮಿತ ಕಟ್ಟಡಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೀಲ್‌ಮಾಡಲು ದೆಹಲಿ ಮೇಯರ್ ಪ್ರವೇಶ್ ವಾಹಿ ಆದೇಶಿಸಿದ್ದು, ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಎಚ್ಚರಿಕೆ ನೀಡಿದ್ದಾರೆ. ಈ

ದುರಂತದ ಹಿನ್ನೆಲೆಯಲ್ಲಿ ಹಾಗೂ ಪ್ರದೇಶದಲ್ಲಿ ಹೆಚ್ಚಿದ ಆತಂಕದಿಂದಾಗಿ ದೆಹಲಿ ವಿಶ್ವವಿದ್ಯಾಲಯದ ವೆಂಕಟೇಶ್ವರ ಕಾಲೇಜಿಗೆ ಇಂದು ರಜೆ ಘೋಷಿಸಲಾಗಿದ್ದು, ಸಂತ್ರಸ್ತ ವಿದ್ಯಾರ್ಥಿಗಳಿಗೆ ತನ್ನ ತರಗತಿ ಕೊಠಡಿಗಳಲ್ಲಿ ತಾತ್ಕಾಲಿಕ ವಸತಿ ಕಲ್ಪಿಸಿದೆ. ಜೊತೆಗೆ ಆರ್ಯಭಟ್ಟ ಕಾಲೇಜು ಕೂಡ ಇಂದು ಬೋಧನಾ ಚಟುವಟಿಕೆಗಳನ್ನು ಅಮಾನತುಗೊಳಿಸಿದ್ದು, ಸಂಕಷ್ಟದಲ್ಲಿರುವ ವಿದ್ಯಾರ್ಥಿಗಳಿಗೆ ಕಾಲೇಜನ್ನು ತಾತ್ಕಾಲಿಕ ವಸತಿ ನಿಲಯವನ್ನಾಗಿ ಪರಿವರ್ತಿಸಿ ನೆರವು ಹಸ್ತ ಚಾಚಿದೆ.

<><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಅನ್ನು ಖಾಸಗೀಕರಣಗೊಳಿಸಲಾಗುತ್ತಿದೆ ಅಥವಾ ಅದರ ಪ್ರಾಮುಖ್ಯತೆಯನ್ನು ಕುಗ್ಗಿಸಲಾಗುತ್ತಿದೆ ಎಂಬ ಮಾಧ್ಯಮ ವರದಿಗಳು ಹಾಗೂ ವದಂತಿಗಳಿಗೆ ಇಸ್ರೋ ಸ್ಪಷ್ಟನೆ ನೀಡಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿರುವ ಇಸ್ರೋ, ಸಂಸ್ಥೆಯನ್ನು ಯಾವುದೇ ಕಾರಣಕ್ಕೂ ಖಾಸಗೀಕರಣಗೊಳಿಸುವುದಿಲ್ಲ ಹಾಗೂ ಅದರ ಮಹತ್ವವೇನೂ ಕಡಿಮೆಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆಯು ಭಾರತದ ಮುಂದಿನ ತಲೆಮಾರಿನ ಬಾಹ್ಯಾಕಾಶ ಯೋಜನೆಗಳ ಮೇಲೆ ಇಸ್ರೋ ಇನ್ನಷ್ಟು ತೀವ್ರವಾಗಿ ಗಮನಹರಿಸಲು ನೆರವಾಗಲಿದೆ ಎಂದು ತಿಳಿಸಿದೆ. ಬಾಹ್ಯಾಕಾಶ ವಲಯದ ಸುಧಾರಣೆಗಳನ್ನು ಖಾಸಗೀಕರಣ ಎಂದು ನೋಡದೆ, ಬಾಹ್ಯಾಕಾಶ ವ್ಯವಸ್ಥೆಯ ವಿಸ್ತರಣೆ ಮತ್ತು ಸಾಮರ್ಥ್ಯ ವೃದ್ಧಿ ಎಂದು ಗ್ರಹಿಸಬೇಕು ಎಂದು ಸಂಸ್ಥೆ ತಿಳಿಸಿದೆ. ಭಾರತೀಯ ಉದ್ಯಮಗಳು ಬೆಳೆದಂತೆ, ಪಕ್ವವಾದ ಹಾಗೂ ವಿಸ್ತರಿಸಬಹುದಾದ ತಂತ್ರಜ್ಞಾನ ಚಟುವಟಿಕೆಗಳನ್ನು ಕೈಗಾರಿಕೆಗಳೇ ಕೈಗೆತ್ತಿಕೊಳ್ಳಲಿವೆ. ಇದರಿಂದ ಬೃಹತ್ ಪ್ರಮಾಣದ ಉತ್ಪಾದನೆ, ವಾಣಿಜ್ಯೀಕರಣ ಮತ್ತು ಜಾಗತಿಕ ಮಾರುಕಟ್ಟೆಗೆ ಪ್ರವೇಶ ಸಾಧ್ಯವಾಗಲಿದೆ. ಈ ಮೂಲಕ ಇಸ್ರೋದ ಅತ್ಯುತ್ತಮ ವಿಜ್ಞಾನಿಗಳು ಹಾಗೂ ತಾಂತ್ರಿಕ ಸಿಬ್ಬಂದಿ ಮುಂದುವರಿದ ಸಂಶೋಧನೆಗಳು, ನೂತನ ತಂತ್ರಜ್ಞಾನಗಳ ಅಭಿವೃದ್ಧಿ ಮತ್ತು ರಾಷ್ಟ್ರೀಯ ಯೋಜನೆಗಳತ್ತ ಪೂರ್ಣ ಗಮನ ಹರಿಸಲು ಸಾಧ್ಯವಾಗುತ್ತದೆ ಎಂದು ಇಸ್ರೋ ತಿಳಿಸಿದೆ.

<><><>

ಮಧ್ಯಪ್ರದೇಶ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಮೂರು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಗೆ ತಲುಪಿದ್ದು, ದುಬೈನಲ್ಲಿ ನಡೆಯುತ್ತಿರುವ ವಾರ್ಷಿಕ ಹೂಡಿಕೆ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಜ್ಯವನ್ನು ಪ್ರಮುಖ ಹೂಡಿಕೆ ತಾಣವನ್ನಾಗಿ ಬಿಂಬಿಸುವ ಉದ್ದೇಶದಿಂದ ಜಾಗತಿಕ ಹೂಡಿಕೆದಾರರೊಂದಿಗೆ ಅವರು ಸಂವಾದ ನಡೆಸಲಿದ್ದಾರೆ. ರಾಜ್ಯದಲ್ಲಿ ಜವಳಿ, ಕೃತಕಬುದ್ಧಿಮತ್ತೆ, ಕೃಷಿ, ಆಹಾರ ಸಂಸ್ಕರಣೆ, ಗಣಿಗಾರಿಕೆ ಹಾಗೂ ಸರಕು ಸೇರಿದಂತೆ ವಿವಿಧ ವಲಯಗಳಲ್ಲಿ ಹೂಡಿಕೆ ಆಕರ್ಷಿಸಿ ಯುವಜನತೆಗೆ ವ್ಯಾಪಕ ಉದ್ಯೋಗವಕಾಶ ಸೃಷ್ಟಿಸುವುದು ಈ ಭೇಟಿಯ ಉದ್ದೇಶವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ತಮ್ಮ ಪ್ರವಾಸದ ಭಾಗವಾಗಿ ಅವರು, ಅರಬ್ ಸಂಸತ್ತಿನ ಅಧ್ಯಕ್ಷ ಮೊಹಮ್ಮದ್ ಅಹಮ್ಮದ್ ಅಲ್ ಯಮ್ಮಾಹಿ ಅವರನ್ನು ಭೇಟಿಯಾಗಿ ಮುಂಬರುವ ಮಧ್ಯ ಪ್ರದೇಶದಲ್ಲಿ ಆಯೋಜನೆಗೊಳ್ಳುತ್ತಿರುವ ಜಾಗತಿಕ ಹೂಡಿಕೆದಾರರ ಶೃಂಗಸಭೆಗೆ ಆಗಮಿಸುವಂತೆ ಆಹ್ವಾನ ನೀಡಿದರು.

<><><>

ಮುಂಬರುವ ದಿನಗಳಲ್ಲಿ ಹೊರ್ಮುಜ್ ಜಲಸಂಧಿಯ ಹೊರ ಭಾಗದಲ್ಲಿ ಹೊಸ ನಿರ್ಬಂಧಿತ ವಲಯವನ್ನು ಘೋಷಿಸುವುದಾಗಿ ಇರಾನ್‌ನ ಉನ್ನತ ಭದ್ರತಾ ಅಧಿಕಾರಿ ಪ್ರಕಟಿಸಿದ್ದು, ತಮ್ಮ ದೇಶದ ಸಮನ್ವಯವಿಲ್ಲದೇ ಈ ಪ್ರದೇಶವನ್ನು ಪ್ರವೇಶಿಸುವ ಯಾವುದೇ ಹಡಗುಗಳನ್ನು ಇರಾನ್ ನಿಷೇಧಿತ ಪಟ್ಟಿಗೆ ಸೇರಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಅಮೆರಿಕ ನೌಕಾಪಡೆಯ ತಡೆಗೋಡೆ ರೇಖೆಯಿಂದ ಪ್ರಾರಂಭವಾಗುವ ಈ ವಲಯ ಪರ್ಶಿಯನ್ ಕೊಲ್ಲಿಯ ಕೆಲವು ಭಾಗಗಳವರೆಗೆ ವಿಸ್ತರಿಸಲಿದೆ. ಜಲಸಂಧಿಯ ಕಡೆಗೆ ಎರಡೂ ಕಡೆಯಿಂದ ಚಲಿಸುವ ಮತ್ತು ಈ ವಲಯವನ್ನು ಪ್ರವೇಶಿಸುವ ಹಡಗುಗಳು ನಿರ್ಬಂಧವನ್ನು ಎದುರಿಸಬೇಕಾಗುತ್ತದೆ ಎಂದು ಇರಾನ್ ಸರ್ಕಾರಿ ಮಾಧ್ಯಮಗಳು ವರದಿ ಮಾಡಿವೆ.

<><><>

ಬಿಹಾರ ಹಾಗೂ ಉತ್ತರ ಪ್ರದೇಶದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಿಂದಾಗಿ ಪ್ರವಾಹ ಪರಿಸ್ಥಿತಿ ತೀವ್ರಗೊಂಡಿದ್ದು, ಸಾಮಾನ್ಯ ಜನಜೀವನ ಅಸ್ತವ್ಯಸ್ತಗೊಂಡಿದೆ. ಬಿಹಾರದಲ್ಲಿ ಗಂಗಾ, ಗಂಡಕಿ ಮತ್ತು ಕೋಸಿ ಸೇರಿದಂತೆ ಪ್ರಮುಖ ನದಿಗಳು ಅಪಾಯ ಮಟ್ಟ ಮೀರಿ ಹರಿಯುತ್ತಿವೆ. ಗಂಗಾ ನದಿಯ ನೀರಿನ ಮಟ್ಟ ನಿರಂತರವಾಗಿ ಏರಿಕೆಯಾಗುತ್ತಿರುವ ಹಿನ್ನೆಲೆ ನದಿಯ ಕೆಳಪಾತ್ರದ

ಪ್ರದೇಶಗಳಲ್ಲಿ ಹೆಚ್ಚು ಜಾಗರೂಕತೆ ವಹಿಸಲಾಗಿದೆ. ಇತ್ತ ಉತ್ತರಪ್ರದೇಶದಲ್ಲೂ ಪ್ರವಾಹ ಪರಿಸ್ಥಿತಿ ಇದ್ದು, ರಾಜ್ಯದ ೨೪ ಜಿಲ್ಲೆಗಳು ಜಲಾವೃತಗೊಂಡಿವೆ. ಮಳೆ ಸಂಬಂಧಿತ ಅವಗಢಗಳಿಂದ ೫ ಮಂದಿ ಮೃತಪಟ್ಟಿದ್ದಾರೆ. ಈ ನಡುವೆ ಮುಂಬರುವ ಎರಡು ದಿನಗಳಲ್ಲಿ ಬಿಹಾರ, ಪೂರ್ವ ಉತ್ತರಪ್ರದೇಶ, ಪೂರ್ವ ಮಧ್ಯಪ್ರದೇಶ, ಉತ್ತರಾಖಂಡ, ಪಶ್ಚಿಮ ಬಂಗಾಳ ಹಾಗೂ ಈಶಾನ್ಯ ರಾಜ್ಯಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ತಾಷ್ಕೆಂಟ್‌ನಲ್ಲಿ ನಿನ್ನೆ ನಡೆದ ತಮ್ಮ ಅಂತಿಮ ಅರ್ಹತಾ ಪಂದ್ಯದಲ್ಲಿ ಭಾರತ ಫುಟ್ಬಾಲ್ ತಂಡ ಬಾಂಗ್ಲಾದೇಶ ವಿರುದ್ಧ ೩-೦ ಗೋಲುಗಳ ಭರ್ಜರಿ ಜಯ ಸಾಧಿಸುವ ಮೂಲಕ ೨೦ ವರ್ಷಗಳ ನಂತರ ಎಎಫ್‌ಸಿ ೨೦ ವರ್ಷದೊಳಗಿನವರ ಏಷ್ಯನ್ ಕಪ್ ಫುಟ್ಬಾಲ್ ಟೂರ್ನಿಗೆ ಅರ್ಹತೆ ಪಡೆದುಕೊಂಡಿದೆ. ಬಿ ಗುಂಪಿನ ರೋಚಕ ಪಂದ್ಯದಲ್ಲಿ ಭಾರತದ ಪರ ಡ್ಯಾನಿ ಮೈತೇಯ್ ಲೈಶ್ರಾಮ್, ವಿಶಾಲ್ ಯಾದವ್ ಹಾಗೂ ಎಂಡಿ ಅರ್ಬಾಶ್ ಗೋಲು ಗಳಿಸಿದರು. ಈ ಗೆಲುವಿನೊಂದಿಗೆ ಮೂರು ಪಂದ್ಯಗಳಿಂದ ಭಾರತ ಒಟ್ಟು ೬ ಅಂಕಗಳನ್ನು ಕಲೆ ಹಾಕಿದೆ. ಭಾರತ ತಂಡ ಕೊನೆಯ ಬಾರಿ ೨೦೦೬ರಲ್ಲಿ ಈ ಪಂದ್ಯಾವಳಿಯಲ್ಲಿ ಆಡಿತ್ತು. ಎಎಫ್‌ಸಿ ೨೦ ವರ್ಷದೊಳಗಿನವರ ಏಷ್ಯನ್ ಕಪ್ ಟೂರ್ನಿ ೨೦೨೬ರ ಮಾರ್ಚ್ ೨೪ ರಿಂದ ಏಪ್ರಿಲ್ ೧೦ರವರೆಗೆ ಚೀನಾದಲ್ಲಿ ನಡೆಯಲಿದೆ.

<><><>

ಚೀನಾದ ಶೆನ್‌ಜೆನ್‌ನಲ್ಲಿ ನಡೆದ ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಪುರುಷರ ಡಬಲ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ. ನಿನ್ನೆ ನಡೆದ ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ ಚೀನಾದ ಹೆ ಜಿ ಟಿಂಗ್ ಮತ್ತು ರೆನ್ ಕ್ಸಿಯಾಂಗ್ ಯು ಜೋಡಿಯನ್ನು ೧೧-೨೧, ೨೧-೧೩, ೨೧-೧೬ ಅಂತರದಲ್ಲಿ ಪರಾಭವಗೊಳಿಸಿತು. ಈ ಗೆಲುವಿನೊಂದಿಗೆ ಚೀನಾ ಮಾಸ್ಟರ್ಸ್ ಇತಿಹಾಸದಲ್ಲೇ ಭಾರತಕ್ಕೆ ಚೊಚ್ಚಲ ಸ್ವರ್ಣ ಪದಕ ತಂದುಕೊಟ್ಟ ಕೀರ್ತಿಗೆ ಸಾತ್ವಿಕ, ಚಿರಾಗ್ ಜೋಡಿ ಭಾಜನವಾಗಿದೆ. ಇದು ಈ ಇಬ್ಬರು ಆಟಗಾರರ ವೃತ್ತಿಜೀವನದ ೧೦ನೇ ಡಿಡಬ್ಲ್ಯೂಎಫ್ ವಿಶ್ವ ಟೂರ್ ಪ್ರಶಸ್ತಿಯಾಗಿದೆ. ಈ ಭಾರತೀಯ ಜೋಡಿ ಇದಕ್ಕೂ ಮುನ್ನ ೨೦೨೩ ಹಾಗೂ ೨೦೨೫ರ ಚೀನಾ ಮಾಸ್ಟರ್ಸ್‌ನಲ್ಲಿ ರನ್ನ‌ರ್ ಅಪ್ ಆಗಿತ್ತು.